ಪ್ರಮಾಣ ವಚನ ಬೋಧಿಸಿದ ದಿನಾಂಕಃ **11.09.2025.**
ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋದಿಸಲಾಯಿತು.

**ಪಾಟೀ ಸವಾಲುಃ ವಾದಿ ಪರ ಶ್ರೀ ಹೆಚ್.ವಿ.ಎಸ್. ವಕೀಲರಿಂದ**

ಸಾವಿತ್ರಮ್ಮನವರು ನನ್ನ ತಾಯಿ. ನನ್ನ ತಾಯಿಗೆ ಕಣ್ಣು ಕಾಣಿಸುತ್ತದೆ ಹಾಗೂ ಕಿವಿ ಕೇಳಿಸುತ್ತದೆ ಎಂದರೆ ಸಾಕ್ಷಿಯು ಸ್ವಲ್ಪ ಕಣ್ಣು ಕಾಣಿಸುತ್ತದೆ, ಕಿವಿ ಕೇಳಿಸುವುದಿಲ್ಲ ಹಾಗೂ ಓಡಾಡಲು ಆಗುವುದಿಲ್ಲ ಎಂದು ಹೇಳುತ್ತಾರೆ. ನನ್ನ ತಾಯಿಯು ಆರೋಗ್ಯವಾಗಿ ಇದ್ದರೂ ಕೂಡ ಅವರು ನ್ಯಾಯಾಲಯಕ್ಕೆ ಬಂದು ಸಾಕ್ಷಿ ಹೇಳಿದರೆ ಸತ್ಯಾಂಶ ಹೊರ ಬರುತ್ತದೆ ಎಂದು ನಾನು ಅಧಿಕಾರ ಪತ್ರ ಸೃಷ್ಟಿಸಿ ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನ್ನ ತಾಯಿಗೆ ಕಾಲಿಗೆ ಪೆಟ್ಟಾಗಿದೆ ಎಂದು ತೋರಿಸಲು ನ್ಯಾಯಾಲಯಕ್ಕೆ ದಾಖಲೆ ಹಾಜರುಪಡಿಸಿದ್ದೀರಾ ಎಂದರೆ ಇಲ್ಲ.

ವಾದಿಯು ಖಾತೆ ನಂ.**176** ಮತ್ತು **171** ರ ಆಸ್ತಿಗೆ ಸಂಬಂಧಿಸಿದಂತೆ ಈ ದಾವೆಯನ್ನು ಹಾಕಿದ್ದಾರೆ. ಖಾತೆ ನಂ.**171** ರ ಚಕ್ಕುಬಂಧಿ ಗೊತ್ತು. ಪೂರ್ವಕ್ಕೆ – ಪಾಪಣ್ಣನವರ ಸ್ವತ್ತು, ಪಶ್ಚಿಮಕ್ಕೆ – ರಸ್ತೆ, ಉತ್ತರಕ್ಕೆ – ರಸ್ತೆ ಮತ್ತು ದಕ್ಷಿಣಕ್ಕೆ – ಪಾಪೇಗೌಡರವರ ಸ್ವತ್ತು. ದಾವಾ ಆಸ್ತಿಗಳು ವಾದಿಯರ ಪಿತ್ರಾರ್ಜಿತ ಸ್ವತ್ತು ಎಂದರೆ ಗೊತ್ತಿಲ್ಲ. ವಾದಿಯರ ತಂದೆ ಬದುಕಿರುವ ಸಮಯದಲ್ಲಿ ಕುಟುಂಬದ ಆಸ್ತಿಗಳಿಗೆ ಸಂಬಂಧಿಸಿದಂತೆ ಯಾವುದೇ ವಿಭಾಗವಾಗಿಲ್ಲ ಎಂದರೆ ಗೊತ್ತಿಲ್ಲ. ದಾವಾ ಆಸ್ತಿಗಳು ವಾದಿಯರ ಒಟ್ಟು ಕುಟುಂಬದ ಪಿತ್ರಾರ್ಜಿತ ಆಸ್ತಿಯಾಗಿದ್ದರೂ ಕೂಡ **2**ನೇ ಪ್ರತಿವಾದಿಯ ಕಡೆಯಿಂದ ಕ್ರಯಪತ್ರವನ್ನು ಸೃಷ್ಟಿ ಮಾಡಿದ್ದೇನೆ ಎಂದರೆ ಸರಿಯಲ್ಲ. ವಾದಿಯರ ಭಾಗಾಂಶದ ಹಕ್ಕನ್ನು ಅಕ್ರಮವಾಗಿ ಪಡೆಯುವ ಉದ್ದೇಶದಿಂದ **2**ನೇ ಪ್ರತಿವಾದಿಯೊಂದಿಗೆ ಶಾಮೀಲಾಗಿ ಕ್ರಯಪತ್ರವನ್ನು ಸೃಷ್ಟಿ ಮಾಡಿದ್ದೇನೆ ಎಂದರೆ

ಸರಿಯಲ್ಲ. ದಾವಾ ಆಸ್ತಿಗಳು ವಾದಿಯರ ಪಿತ್ರಾರ್ಜಿತ ಆಸ್ತಿಯಾಗಿರುವುದರಿಂದ ಅದರಲ್ಲಿ ಅವರಿಗೆ ಭಾಗಾಂಶದ ಹಕ್ಕಿದೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇರುವುದಿಲ್ಲ**

(ನನ್ನ ಉಕ್ತಲೇಖಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಇದೆ

ಹಿರಿಯ ಸಿವಿಲ್ ನ್ಯಾಯಾಧೀಶರು
ದೊಡ್ಡಬಳ್ಳಾಪುರ.